**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.331/2021**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 9

ಸಾಕ್ಷಿದಾರರ ಹೆಸರು : ರುದ್ರೇಶ್

ತಂದೆಯ ಹೆಸರು: :ಪೂಜನರಸಯ್ಯ

ವಯಸ್ಸು : **41 ವರ್ಷ**

ಉದ್ಯೋಗ : ವ್ಯವಸಾಯ

ವಾಸಸ್ಥಳ : ಗೋಪಾಲಪುರ

**ದಿನಾಂಕ: 23-09-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು ನಾಲ್ಕು ವರ್ಷಗಳ ಹಿಂದೆ ನಾನು ಕೆಂಚಾಪುರದ ಹತ್ತಿರ 11-00 ಗಂಟೆ ಸಮಯದಲ್ಲಿ ರಸ್ತೆಯಲ್ಲಿ ಬರುತ್ತಿರುವಾಗ ಅಪಘಾತದ ವಿಚಾರವಾಗಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಅಮಾನತ್ತು ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-3 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-3(ಬಿ) ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ತಾನು ಕೆಂಚಾಪುರದಲ್ಲಿ ಸಹಿ ಮಾಡಿದ್ದು, ಅದರಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುವುದಿಲ್ಲ ಹಾಗೂ ನನ್ನ ಮುಂದೆ ಯಾವುದೇ ವಸ್ತುವನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ ಎಂದು ನುಡಿದಿರುತ್ತಾರೆ.

ಸಾಕ್ಷಿಗೆ ಎರಡು ಛಾಯಚಿತ್ರಗಳನ್ನು ತೋರಿಸಲಾಗಿದ್ದು, ಅವುಗಳಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-4 ಮತ್ತು 5 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿಃ **12-02-2020** ರಂದು ಮಧ್ಯಾಹ್ನ **2-00** ರಿಂದ **3-00** ಗಂಟೆ ಸಮಯದಲ್ಲಿ ಕೆಂಚಾಪುರ ಗೇಟ್ ಹತ್ತಿರದ ತರೀಕೆರೆ ಲಿಂಗದಹಳ್ಳಿ ರಾಜ್ಯ ಹೆದ್ದಾರಿ ಟಾರು ರಸ್ತೆಯಲ್ಲಿ ಅಪಘಾತದ ವಿಚಾರವಾಗಿ ಪೊಲೀಸರು ಮಹಜರ್ ಮಾಡಿದ್ದು, ಸದರಿ ಮಹಜರ್ ಗೆ ನೀವು ಸಹಿ ಮಾಡಿರುತ್ತಿರಾ ಎಂದರೆ ಸಾಕ್ಷಿ ಸಹಿ ಮಾಡಿರುತ್ತೇನೆ, ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ ಎಂದು ನುಡಿದಿರುತ್ತಾರೆ. ದಿಃ **12-02-2020** ರಂದು ಮಧ್ಯಾಹ್ನ **3-30** ಗಂಟೆ ಸಮಯದಲ್ಲಿ ಲಿಂಗದಹಳ್ಳಿ ಪೊಲೀಸ್ ಠಾಣಾ ಆವರಣದಲಿಲ ಅಪಘಾತಕ್ಕೆ ಒಳಗಾದ ವಾಹನಗಳ ಅಮಾನತ್ತು ಮಹಜರ್ ನ್ನು ಪೊಲೀಸರು ಜರುಗಿಸಿದ್ದು, ಸದರಿ ಮಹಜರ್ ಗೆ ಸಹಿ ಮಾಡಿರುತ್ತಿರಾ ಎಂದರೆ ಸಾಕ್ಷಿ ಇಲ್ಲ ಎಂದು ನುಡಿದಿರುತ್ತಾರೆ. ಆ ಸಮಯದಲ್ಲಿ ಪೊಲೀಸರು ನಿಮ್ಮ ಸಮಕ್ಷಮದಲ್ಲಿ ನಂಬರ್ ಪ್ಲೇಟ್ ಇಲ್ಲದ ಟಿ ವಿ ಎಸ್ ಬೈಕ್ ನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸಾಕ್ಷಿ ಪೋಟೋ ತೆಗೆದಿರುತ್ತಾರೆಂದು ನುಡಿದಿರುತ್ತಾರೆ. ಅದರಲ್ಲಿ ಬರೆದ ವಿಚಾರ ನನಗೆ ಗೊತ್ತಿಲ್ಲ.

**ಪಾಟೀ ಸವಾಲು ಃ ಆರೋಪಿ ಪರ ವಕೀಲರಿಂದ.**

ಮಹಜರ್ ನಲ್ಲಿ ಬರೆದಿರುವ ವಿಚಾರ ನನಗೆ ತಿಳಿದಿರುವುದಿಲ್ಲ. ಪೊಲೀಸರ ಒತ್ತಾಯದ ಮೇರೆಗೆ ಸಹಿ ಮಾಡಿರುತ್ತೇನೆ. ಛಾಯಚಿತ್ರದಲ್ಲಿ ಪೊಲೀಸರ ಒತ್ತಾಯದ ಮೇರೆಗೆ ನಿಂತಿರುತ್ತೇನೆ, ನನಗೆ ಯಾವುದೇ ವಿಚಾರ ತಿಳಿದಿರುವುದಿಲ್ಲ.

**ಮರುವಿಚಾರಣೆಃ** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

Sd/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**